# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಅ/ಬ್ಯಾ.ವಿ/ಆ.ಅ/93 /2017-18.

ಕಾರ್ಯಪಾಲಕ ಅಭಿಯಂತರವರ ಕಛೇರಿ
ಬ್ಯಾಟರಾಯನಪುರ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 19/12/2017

## ಆಡಳಿತಾತ್ಮಕ ಅನುಮೋದನೆ

**ವಿಷಯ:-** PACKAGE 1 IMPROVEMENTS TO ROADS AND DRAINS PROVIDING AMMENITIES CONSTRUCTION OF RO WATER PLANT BANGALURU ONE CENTER PROVIDING SODIUM VAPOUR LIGHTS SIGN BOARDS IN WARD NO 5 AND 6 BYATARAYANAPURA DIVISION AS PER ANNEXURE GO NO UDD 217 SFC 2016 DATED 28 5 2016 WORKS SL NO FOR WARD NO 5 1 TO 6WARD NO 6 7 TO 11.

**ಉಲ್ಲೇಖ:1.** Govt Order No. ನಅಇ.641 ಎಂಎನ್‌ವೈ 2017 ದಿನಾಂಕ:11.12.2017

2. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ: 005-16-000052.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪವಿಭಾಗ) ರವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದಲ್ಲಿ P3106 Nagarothana Works" ರ ಅಡಿಯಲ್ಲಿ ಉಲ್ಲೇಖ(2)ರಲ್ಲಿರುವ 11 ಕಾಮಗಾರಿಗಳನ್ನು ಪ್ಯಾಕೇಜ್ ಟೆಂಡರ್‌ನಂತೆ ಕೈಗೊಳ್ಳಲು ರೂ. 450.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿಲಾಗಿದೆ. ಸದರಿ ಕಾಮಗಾರಿಗೆ ಘನಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಂದ ತಾಂತ್ರಿಕ ಮಂಜೂರಾತಿ ಪಡೆದು ಟೆಂಡರ್ ಪ್ರಕ್ರಿಯೆ ಕೈಗೊಳ್ಳಲಾಗಿರುತ್ತದೆ.

ಮುಂದುವರೆದು ಉಲ್ಲೇಖ(1)ರನ್ವಯ ಘನಸರ್ಕಾರದಿಂದ ಸದರಿ ಕಾಮಗಾರಿಗೆ ಘಟನೋತ್ತರ ಆಡಳಿತಾತ್ಮಕ ಅನುಮೋದನೆ ಹಾಗೂ ಟೆಂಡರ್ ಅನುಮೋದನೆ ನೀಡಲಾಗಿರುತ್ತದೆ. ಆದ್ದರಿಂದ ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2015ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

**ಷರತ್ತುಗಳು:**

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
2. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
3. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
4. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
5. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.
6. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

19/12

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು-92

19/12

**ಪ್ರತಿಯನ್ನು:**

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.